## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅ. ದೇವೇಗೌಡ ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:–**

ಪಾಲಿಕೆಯಲ್ಲಿ ಹಾಗೂ ಸರ್ಕಾರದ ಕೆಲವು ಇಲಾಖೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುತ್ತಿದ್ದು, ಅದರಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿದ್ಯಾ ಇಲಾಖೆಯಲ್ಲಿ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು / ಉಪನ್ಯಾಸಕರಿಗೆ ನಿಯಮಾವಳಿಯಲ್ಲಿ ಅವಕಾಶವಿದ್ದು, ಈ ಪ್ರಸ್ತಾವನೆಯನ್ನು ಜಾರಿಗೆ ತರಲಾಗಿದೆಯೇ? ಎಂಬ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ:**

ಪಾಲಿಕೆಯ ಶಾಲಾ / ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು / ಉಪನ್ಯಾಸಕರ ಸೇವೆಯನ್ನು ಪ್ರತಿ ಸಾಲಿನಲ್ಲಿಯೂ ಟೆಂಡರ್ ಆಹ್ವಾನಿಸಿ ಟೆಂಡರ್‌ನಲ್ಲಿ ಆಯ್ಕೆಯಾಗುವ ಸಂಸ್ಥೆಯಿಂದ ಮಾನವ ಸಂಪನ್ಮೂಲಗಳನ್ನು ಪೂರೈಸಲು 11 ತಿಂಗಳಿಗೆ ಮಾತ್ರ ಸೇವೆಯನ್ನು ಒದಗಿಸುವಂತೆ ಒಡಂಬಡಿಕೆಯನ್ನು ಮಾಡಿಕೊಂಡು ಸೇವೆಯನ್ನು ಪಡೆಯಲಾಗುತ್ತಿದೆ. ಆದುದ್ದರಿಂದ ಹೊರಗುತ್ತಿಗೆ ಆಧಾರದ ಶಿಕ್ಷಕರು / ಉಪನ್ಯಾಸಕರುಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನದಡಿ ವೇತನ ನೀಡಲು ಸರ್ಕಾರದ ನಿಯಾಮವಳಿಗಳಲ್ಲಿ ಅವಕಾಶವಿರುವುದಿಲ್ಲ.

ಸಂಖ್ಯೆ: ನಅಇ 56 ಎಂಎನ್‌ವೈ 2024(ಇ)

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ.